<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ಶ್ರೀ ಶಿವರಾಮ್ ಕೆ.ಚವ್ಹಾಣ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕ ಪಂಚಾಯತ್, ಔರಾದ್ ರವರ ವಿರುದ್ಧದ ಶಿಸ್ತುಕ್ರಮದ ಬಗ್ಗೆ – ಅಂತಿಮ ಆದೇಶ.

ಓದಲಾಗಿದೆ: 1. ಶ್ರೀ ಶಿವರಾಮ್ ಕೆ.ಚವ್ಹಾಣ ರವರಿಗೆ ಕಾರಣ ಕೇಳುವ ನೋಟೀಸ್ ಜಾರಿ ಮಾಡಿದ ದಿನಾಂಕ: 05-09-2011.

2. ಶ್ರೀ ಶಿವರಾಮ್ ಕೆ. ಚವ್ಹಾಣ ರವರ ಲಿಖಿತ ಹೇಳಿಕೆ ದಿನಾಂಕ: 22-09-2011.

3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್ ರವರ ಪತ್ರ ಸಂಖ್ಯೆ: ಜಿಪಂಬೀ/ಸಿಬ್ಬಂದಿ-2/ಸಿಆರ್-60/ 2009-10 ದಿನಾಂಕ: 26-05-2011.

------

ಪ್ರಸ್ತಾವನೆ:

ಶ್ರೀ ಶಿವರಾಮ್ ಕೆ.ಚವ್ಹಾಣ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಔರಾದ್ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಬಿಡುಗಡೆಯಾದ ಮೊತ್ತವನ್ನು ಗ್ರಾಮ ಪಂಚಾಯಿತಿಗಳಿಂದ ಹಣ ಬಳಕೆ ಪ್ರಮಾಣ ಪತ್ರವನ್ನು ಪಡೆದು ಅದಕ್ಕನುಗುಣವಾಗಿ ಗ್ರಾಮ ಪಂಚಾಯಿತಿಗಳಿಗೆ ಹಣ ಬಿಡುಗಡೆ ಮಾಡದೆ ಮನಬಂದಂತೆ ಹಣ ಬಿಡುಗಡೆ ಮಾಡಿರುತ್ತಾರೆಂದು; ಅಧೀನ ಸಿಬ್ಬಂದಿಗಳ ಮೇಲೆ ಹಿಡಿತ ಹೊಂದಿರುವುದಿಲ್ಲವೆಂದು; ಗ್ರಾಮ ಪಂಚಾಯಿತಿಗಳ ಮೇಲುಸ್ತುವಾರಿಯನ್ನು ಸರಿಯಾಗಿ ನಡೆಸದೇ ಹಾಗೂ ಸರ್ಕಾರದ ಯೋಜನೆಗಳ ಅನುಷ್ಠಾನದಲ್ಲಿ ನಿರ್ಲಕ್ಷತನ ತೋರಿ ಕರ್ತವ್ಯಲೋಪವೆಸಗಿರುವ ಬಗ್ಗೆ ಮೇಲೆ ಓದಲಾದ ಕ್ರಮಸಂಖ್ಯೆ(1)ರಲ್ಲಿ ದಿನಾಂಕ: 5-9-2011 ರಂದು ಕರ್ನಾಟಕ ನಾಗರೀಕ ಸೇವೇ (ವ.ನಿ.ಮೇ) ನಿಯಮಗಳು 1957ರ ನಿಯಮ-12 ರಡಿ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು.

ಪ್ರತಿಯಾಗಿ ಆರೋಪಿತ ಅಧಿಕಾರಿಯವರು ಸದರಿ ಕಾರಣ ಕೇಳುವ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ದಿನಾಂಕ:22-09-2011 ರಂದು ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿ, ಕಛೇರಿಯ ದೈನಂದಿನ ಕೆಲಸಕ್ಕೆ ತಾವು ದಿನನಿತ್ಯ ಹಾಜರಾಗಿದ್ದು, ತಮ್ಮ ಅಧೀನ ಸಿಬ್ಬಂದಿಯ ಮೇಲೆ ಸಂಪೂರ್ಣ ನಿಯಂತ್ರಣ ಹೊಂದಿದ್ದು; ಸರ್ಕಾರದ ವಿವಿಧ ಯೋಜನೆಯಡಿಯಲ್ಲಿ ನಿಗದಿಪಡಿಸಿದ ಗುರಿಯನ್ನು ನಿಗದಿತ ಅವಧಿಯೊಳಗೆ ಸಾಧಿಸಿ, ಮೇಲಾಧಿಕಾರಿಗಳಿಗೆ ಸಕಾಲದಲ್ಲಿ ವರದಿ ಸಲ್ಲಿಸಿರುವುದಾಗಿಯೂ; ಎಂ.ಜಿ.ಎನ್.ಆರ್.ಇ.ಜಿ.ಎ. ಯೋಜನೆಯಡಿ, ನಿಯಮಾನುಸಾರ ಬಳಕೆ ಪ್ರಮಾಣ ಪತ್ರವನ್ನು ಪಡೆದು, ಬೇಡಿಕೆಗೆ ಅನುಗುಣವಾಗಿ ಅನುದಾನವನ್ನು ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡಿರುವುದಾಗಿ ತಿಳಿಸುತ್ತಾ ತಮ್ಮ ವಿರುದ್ಧದ ಆರೋಪಗಳು ಸತ್ಯಕ್ಕೆ ದೂರವಾಗಿದ್ದು ತಮ್ಮನ್ನು ಆರೋಪಮುಕ್ತಗೊಳಿಸಲು ಕೋರಿರುತ್ತಾರೆ.

ಶ್ರೀ ಶಿವರಾಮ್ ಕೆ.ಚವ್ಹಾಣ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಔರಾದ್ ಇವರ ಮೇಲಿನ ಆರೋಪಗಳನ್ನು ಸಾಬೀತುಪಡಿಸುವಂತಹ ದಾಖಲೆಗಳು ಲಭ್ಯವಿಲ್ಲವೆಂದು ಮೇಲೆ ಓದಲಾದ ಕ್ರಮಸಂಖ್ಯೆ (3) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್ ರವರು ವರದಿ ಮಾಡಿರುತ್ತಾರೆ. ಆರೋಪಿತ ಅಧಿಕಾರಿಯವರು ತಮ್ಮ ವಿರುದ್ಧದ ಆರೋಪಗಳನ್ನು ಅಲ್ಲಗಳೆದಿದ್ದರೂ ಸಹ ಯೋಜನೆಗಳ ಅನುಷ್ಠಾನದಲ್ಲಿ ನಿಧಾನ ಗತಿಯನ್ನನುಸರಿಸಿ ಕರ್ತವ್ಯದಲ್ಲಿ

ನಿರ್ಲಕ್ಷತನ ತೋರಿರುವುದು ಕಂಡುಬರುತ್ತದೆ. ಆದ್ದರಿಂದ ಸದರಿಯವರ ಕರ್ತವ್ಯಲೋಪಕ್ಕೆ ಅನುಗುಣವಾಗಿ ದಂಡನೆಯನ್ನು ವಿಧಿಸಲು ಸರ್ಕಾರವು ತೀರ್ಮಾನಿಸಿರುತ್ತದೆ. ಅದರಂತೆ, ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 23 ವಿಸೇಬಿ 2009, ಬೆಂಗಳೂರು, ದಿನಾಂಕ:16-11-2011**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಶಿವರಾಮ್ ಕೆ.ಚವ್ಹಾಣ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಔರಾದ್ (ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕ ಪಂಚಾಯತ್, ಭಾಲ್ಕಿ) ಇವರಿಗೆ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಗಳು 1957ರ ನಿಯಮ-8(ii)ರಂತೆ "ವಾಗ್ದಂಡನೆ" ಯನ್ನು ವಿಧಿಸಿದೆ. ಇನ್ನು ಮುಂದೆ ತಮ್ಮ ಕರ್ತವ್ಯದಲ್ಲಿ ಯಾವುದೇ ನಿರ್ಲಕ್ಷತೆಗೆ ಅವಕಾಶ ಕೊಡದಂತೆ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

16/11/11
(ಎಸ್.ಯು.ಶಿವಪ್ಪ),
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ, ಬೀದರ್.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೀದರ್.
4. ಮುಖ್ಯಸ್ಥರು, ಗ್ರಾಮ ಸ್ವರಾಜ್ ಘಟಕ, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-52.
5. ಮಾನ್ಯ ಗ್ರಾ.ಅ. & ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
6. ಶ್ರೀ ಎಸ್.ಕೆ.ಚವ್ಹಾಣ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕ ಪಂಚಾಯತ್, ಭಾಲ್ಕಿ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ /ಕಾರ್ಯದರ್ಶಿ(ಪಂ.ರಾಜ್)/ಉಪ ಕಾರ್ಯದರ್ಶಿ (ಆಡಳಿತ), ಗ್ರಾ.ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
8. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

Sbp/-